ಇ) ಫಲಾನುಭವಿಗಳಿಗೆ ಇದರಿಂದ ತೊಂದರೆಯಾಗಿದ್ದು, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು):

ಅ) ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಆಗಸ್ಟ್ 2002 ರೊಳಗಾಗಿ ಪೂರ್ಣವಾಗದ ಕಾರಣ ಮುರಗಮಲ್ಲ ಗ್ರಾಮ ಪಂಚಾಯತಿಯ ವಿಶೇಷ ಸಭೆಯನ್ನು ದಿನಾಂಕ 16.4.2003 ರಂದು ನಡೆಸಿ ಈ ಬಗ್ಗೆ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಲು ನಿರ್ಣಯ ತೆಗೆದುಕೊಳ್ಳಲಾಗಿದೆ. ಅದರ ಆಧಾರದ ಮೇಲೆ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾ ಪಂಚಾಯತಿಗೆ ಅನುಮೋದನೆಗಾಗಿ ಹಾಗೂ ಹಣ ಬಿಡುಗಡೆಗಾಗಿ ಕಳುಹಿಸಲಾಗಿದೆ.

ಆ) ಬಂದಿದೆ.

ಇ) ಅರ್ಹರಾಗಿ ಕಂಡು ಬಂದಿರುವ ಫಲಾನುಭವಿಗಳಿಗೆ ಅನಾನುಕೂಲವಾಗುವುದನ್ನು ತಪ್ಪಿಸಲು ಕೂಡಲೆ ಕ್ರಮ ಕೈಗೊಳ್ಳಲಾಗಿದ್ದು ಈಗಾಗಲೇ ಮಂಜೂರಾತಿ ನೀಡಿರುವಂತೆ, ಕೇವಲ 79 ಅರ್ಹ ಫಲಾನುಭವಿಗಳಿಗೆ ಸಂಬಂಧಿಸಿದಂತೆ ಮಾತ್ರ ದಾಖಲೀಕರಣ ಕಾರ್ಯ ಪ್ರಗತಿಯಲ್ಲಿರುತ್ತದೆ ಹಾಗೂ ಶೀಘ್ರದಲ್ಲಿಯೇ ದಾಖಲೀಕರಣ ಮುಗಿದ ಕೂಡಲೇ ಫಲಾನುಭವಿಗಳಿಗೆ ಮನೆಗಳ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲು ನಿಯಮಾನುಸಾರ ಕ್ರಮ ಕೈಗೊಂಡು ಹಣ ಬಿಡುಗಡೆ ಮಾಡಲಾಗುವುದು.

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕರಿಗೆ ಬಡ್ತಿ

4069 (4547) : ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕ ವೃಂದದಿಂದ ಪ್ರಥಮ ದರ್ಜೆ ಸಹಾಯಕ ವೃಂದಕ್ಕೆ ಬಡ್ತಿ ನೀಡುವಲ್ಲಿ ವಿಳಂಬವಾಗುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಎಷ್ಟು ವರ್ಷದಿಂದ ಬಾಕಿ ಇರುತ್ತದೆ;

ಆ) ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡದೇ ಖಾಲಿ ಇರಿಸಿ ಹೊಸ ಪ್ರೌಢ ಶಾಲೆಗಳಿಗೆ ಹುದ್ದೆ ಮಂಜೂರು ಮಾಡದೆ ಇಲಾಖೆಯ ದೈನಂದಿನ ಕೆಲಸ ಕಾರ್ಯಗಳಿಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಸಚಿವಾಲಯದಲ್ಲಿ ನೇರ ನೇಮಕಾತಿ ಹುದ್ದೆಗಳನ್ನು 1999ರಲ್ಲಿಯೇ ಫ್ರೀಜ್ ಮಾಡಿ ಬಡ್ತಿ ನೀಡಿರುವಾಗ ಅದೇ ಮಾನದಂಡವನ್ನು ಶಿಕ್ಷಣ ಇಲಾಖೆಗೂ ಅನ್ವಯಿಸಿ ಬಡ್ತಿ ನೀಡಲು ಸರ್ಕಾರಕ್ಕಿರುವ ತೊಂದರೆ ಏನು;

ಈ) ಸಚಿವಾಲಯದ ಕ್ರಮವನ್ನು ಅನುಸರಿಸಿ ಸುಮಾರು ವರ್ಷಗಳಿಂದ ಬಡ್ತಿಯಿಲ್ಲದೆ ಕಾಯುತ್ತಿರುವ ಈ ನೌಕರರ ಬಾಕಿಯಿರುವ ಪ್ರಕರಣವನ್ನು ಸರ್ಕಾರ ಎಷ್ಟು ದಿನಗಳಲ್ಲಿ ಇತ್ಯರ್ಥಪಡಿಸುವುದು?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಹೌದು

ದಿನಾಂಕ 22.10.2001ರಿಂದ ಬಾಕಿ ಇದೆ.

ಅ) ಹೌದು

ಇ) ಪರಿಶೀಲಿಸಲಾಗುತ್ತಿದೆ.

ಸರ್ಕಾರಿ ಪ್ರೌಢಶಾಲೆಗಳಲ್ಲಿ ಗುಮಾಸ್ತರ ಹುದ್ದೆಗಳ ಮಂಜೂರಾತಿ

4070 (4548) : ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ 2001 ರಿಂದ ಹೊಸದಾಗಿ ಮಂಜೂರಾಗಿರುವ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು; ಈ ಪ್ರೌಢ ಶಾಲೆಗಳಿಗೆ ಗುಮಾಸ್ತರ ಹುದ್ದೆಗಳನ್ನು ಮಂಜೂರು ಮಾಡದಿರುವುದು ನಿಜವೇ;

ಆ) ಪ್ರೌಢಶಾಲೆಗಳಲ್ಲಿ ಗುಮಾಸ್ತರ ಕೆಲಸವನ್ನು ಶಿಕ್ಷಕರಿಂದ ಮಾಡಿಸುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

ಇ) ಶಿಕ್ಷಕರು ಗುಮಾಸ್ತರ ಕೆಲಸವನ್ನು ಮಾಡುತ್ತಿರುವುದರಿಂದ ಶಿಕ್ಷಕರ ಕೆಲಸವನ್ನು ಯಾರು ನಿರ್ವಹಿಸುತ್ತಾರೆ; ಇದರಿಂದ ಶೈಕ್ಷಣಿಕ ಪ್ರಗತಿ ಕುಂಠಿತವಾಗುವುದಿಲ್ಲವೆ;

ಈ) ಶೈಕ್ಷಣಿಕ ಪ್ರಗತಿಯ ದೃಷ್ಟಿಯಿಂದ ಈ ಪ್ರೌಢ ಶಾಲೆಗಳಿಗೆ ಸರ್ಕಾರ ಗುಮಾಸ್ತರ ಹುದ್ದೆಗಳನ್ನು ಮಂಜೂರು ಮಾಡುವುದೆ?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) 300 ಸರ್ಕಾರಿ ಪ್ರೌಢಶಾಲೆಗಳು ಮಂಜೂರಾಗಿದೆ.

ಹೌದು

ಆ) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಜ್ಞಾಪನೆ ಸಂಖ್ಯೆ ಸಿ5(1)ಯಸ್ಥ-70/2000-01 ದಿನಾಂಕ: 6.7.2001 ರನ್ವಯ ಕಛೇರಿ ಕೆಲಸಕ್ಕಾಗಿ ಶಿಕ್ಷಕರ ಸೇವೆ ಪಡೆಯುವುದನ್ನು ಕಡ್ಡಾಯವಾಗಿ ನಿಷೇದಿಸಲಾಗಿದೆ. ಹಾಗೂ ಸುತ್ತೋಲೆ ಸಂಖ್ಯೆ ಸಿ3(5) (ಪ್ರಾಶಿ) ನಿಯೋಜಿಸಿ 102/2001-02 ದಿನಾಂಕ: 2.11.2001ರ ಪ್ರಕಾರ ಬೋಧಕೇತರ ಕೆಲಸಕ್ಕೆ ಯಾವುದೇ ಶಿಕ್ಷಕರನ್ನು ನಿಯೋಜಿಸಿಕೊಡಿದ್ದಲ್ಲಿ ಕೂಡಲೇ ಅಂತಹ ಶಿಕ್ಷಕರನ್ನು ಬಿಡುಗಡೆಗೊಳಿಸುವಂತೆ ಸೂಚಿಸಿದೆ.

ಇ) ಬೋಧಕೇತರ ಕೆಲಸ ಕಾರ್ಯಗಳಿಗೆ ಶಿಕ್ಷಕರನ್ನು ನೇಮಿಸಿರುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಈ) ಬೋಧಕೇತರ ವೃಂದದ ಹುದ್ದೆಗಳ ಮಂಜೂರಾತಿಗೆ ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುತ್ತದೆ.

ಬೆಂಗಳೂರು ನಗರದಲ್ಲಿ ಅಕ್ಷರ ದಾಸೋಹ ಯೋಜನೆ ಅನುಷ್ಠಾನ

4071 (4549) : ಶ್ರೀ ದಿನೇಶ್ ಗುಂಡುರಾವ್ (ಗಾಂಧಿನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅಕ್ಷರ ದಾಸೋಹ ಯೋಜನೆಯನ್ನು ಬೆಂಗಳೂರು ನಗರದ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಜಾರಿಗೊಳಿಸುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಎಷ್ಟು ಶಾಲೆಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ;

ಆ) ಇಸ್ಕಾನ್ ಸಂಸ್ಥೆಯು ಬೆಂಗಳೂರು ನಗರದಲ್ಲಿ ಎಷ್ಟು ಶಾಲೆಗಳಲ್ಲಿ ಅಕ್ಷಯ ಪಾತ್ರೆ ಯೋಜನೆಯಡಿ ಮಧ್ಯಾಹ್ನ ಉಪಹಾರ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ.